# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಬೆಂಗಳೂರು

ಅನುಸೂಚಿ-ಎ 5

(ಉಪವಿಧಿ ಸಂಖ್ಯೆ : 4.1)

## ನಕ್ಷೆ ಮಂಜೂರಾತಿ ಪತ್ರ

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಕ್ರಮ ಸಂಖ್ಯೆ: ಬೆಂಅಪ್ರಾ/ನಮ/ಅಸ/ಅಅ-1/ತಾಸ-2/ದ/63/2013-14
ದಿನಾಂಕ: 29-03-2014.

ಶ್ರೀಮತಿ/ಶ್ರೀ

**M/s Universal Builders Developers,**
**#487, 38th Cross, Kanakapura Main Road,**
**Opposite J.S.S College,**
**Jayanagar 8th Block,**
**Bangalore – 560082.**

ಮಾನ್ಯರೆ,

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ವಿವಿಧ ಸರ್ವೆ ನಂಬರ್ ಗಳಲಿ ನಿರ್ಮಿಸಲು ಉದ್ದೇಶಿಸಿರುವ ಬಹುವಸತಿ ಸಮುಚ್ಛಯ ಕಟ್ಟಡದ ಮಾರ್ಪಾಡಿತ ನಕ್ಷೆಗೆ ಮಂಜೂರಾತಿ ನೀಡುವ ಕುರಿತು.

ಉಲ್ಲೇಖ: 1. ನಿಮ್ಮ ಅರ್ಜಿ ದಿನಾಂಕ: 27-02-2014.
2. ಮಾನ್ಯ ಆಯುಕ್ತರ ಆದೇಶ ಸಂಖ್ಯೆ: 8686, ದಿನಾಂಕ: 24-03-2014.

******

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ. **51/1P**, (ಹೊಸ ನಂ.**51/16(P), 51/17, 51/18), 127/1(P), 127/2(P), 128/1, 128/2, 128/3, 128/4, 128/5(P), 128/6, 129/1(A), 129/B, 129/2, 129/3, 130/1, 130/2, 130/3, 130/4, 130/5A, 130/5B, 130/6, 130/7, 130/8** ಮತ್ತು **143/P** ರಲ್ಲಿ ನಿರ್ಮಿಸಲು ಉದ್ದೇಶಿಸಿರುವ ಬಹುವಸತಿ ಸಮುಚ್ಛಯ ಕಟ್ಟಡದ ಮಾರ್ಪಾಡಿತ ನಕ್ಷೆಗಳಿಗೆ ಮಂಜೂರಾತಿ ನೀಡುವ ಕುರಿತು ಉಲ್ಲೇಖ ಪತ್ರ (1) ರಲ್ಲಿ ನೀವು ಅರ್ಜಿ ಸಲ್ಲಿಸಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರ ಆದೇಶ ಸಂಖ್ಯೆ: **8686**, ದಿನಾಂಕ: **24-03-2014** ರಲ್ಲಿ ಸದರಿ ನಕ್ಷೆಯನ್ನು ಅನುಮೋದನೆ ಮಾಡಿರುತ್ತಾರೆ. ಅದರಂತೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ. **51/1P**, (ಹೊಸ ನಂ.**51/16(P), 51/17, 51/18), 127/1(P), 127/2(P), 128/1, 128/2, 128/3, 128/4, 128/5(P), 128/6, 129/1(A), 129/B, 129/2, 129/3, 130/1, 130/2, 130/3, 130/4, 130/5A, 130/5B, 130/6, 130/7, 130/8** ಮತ್ತು **143/P** ರಲ್ಲಿ ನಿರ್ಮಿಸಲು ಉದ್ದೇಶಿಸಿರುವ **Block 1** ರಿಂದ **Block 20** ರ ಪೈಕಿ **Block- 1, 2, 3, 4, 5, 6, 7, 8, 9, 10, 18** (ಕ್ಲಬ್ ಹೌಸ್), **19 & 20** (ಒಟ್ಟು 13 ಬ್ಲಾಕ್‌ಗಳು) ಗಳುಳ್ಳ **580** ವಸತಿ ಘಟಕಗಳನ್ನೊಳಗೊಂಡ, **BF+GF+04UF** ಮೇಲಂತಸ್ತುಗಳನ್ನು ಹೊಂದಿರುವ ಬಹುವಸತಿ ಸಮುಚ್ಛಯ ಕಟ್ಟಡಕ್ಕೆ ಈ ಕೆಳಗೆ ನಮೂದಿಸಿದ ಷರತ್ತುಗಳನ್ನು ಪಾಲಿಸುವ ನಿಬಂಧನೆಗೊಳಪಟ್ಟು ಮಾರ್ಪಾಡಿತ ನಕ್ಷೆಗಳಿಗೆ ಮಂಜೂರಾತಿ ನೀಡಲಾಗಿದೆ. ಈ ಮಂಜೂರಾತಿಯು ದಿನಾಂಕ: 29-03-2014 ರಿಂದ ದಿನಾಂಕ: 28-03-2016 ವರೆಗಿನ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ ಎಂದು ಈ ಮೂಲಕ ತಮಗೆ ತಿಳಿಸಲಾಗಿದೆ.

### ಪಾಲಿಸಬೇಕಾದ ಷರತ್ತುಗಳು

1) ಪ್ರಾಧಿಕಾರದಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

ಮು.ತಿ.ನೋ...

2) ಅರ್ಜಿದಾರರು ಪ್ರಾರಂಭಿಕ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸುವ ಮುನ್ನ KSPCB, BWSSB ಇಲಾಖೆಗಳಿಂದ ಪರಿಷ್ಕರಿಸಿದ ನಿರಾಕ್ಷೇಪಣಾ ಪತ್ರ (20 ಬ್ಲಾಕ್ ಗಳಿಗೆ) ಪಡೆದು ಸಲ್ಲಿಸುವುದು.

3) ಕಾಮಗಾರಿ ಪ್ರಾರಂಭಿಸುವುದಕ್ಕಿಂತ ಪೂರ್ವದಲ್ಲಿ ಸಂಬಂಧಪಟ್ಟ ಇಲಾಖೆಯಿಂದ ಖಾತಾ ಪತ್ರ ಪಡೆಯುವುದು.

4) ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಿದ ಷರತ್ತುಗಳನ್ನು ಚಾಚೂ ತಪ್ಪದೇ ಪಾಲಿಸುವುದು. ತಪ್ಪಿದಲ್ಲಿ ಸ್ವಾಧೀನಾನುಭವ ಪತ್ರ (Occupation Certificate) ಪಡೆಯುವ ನಿಮ್ಮ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

5) ಕಟ್ಟಡ ಮಂಜೂರಾತಿಯ ಕುರಿತು ಕಾರ್ಮಿಕ ಇಲಾಖೆ ಅಥವಾ ಪ್ರಾಧಿಕಾರ, ನಿರ್ದೇಶನ ನೀಡಿದಲ್ಲಿ ಅರ್ಜಿದಾರರು ವ್ಯತ್ಯಾಸದ ಹಣವನ್ನು ಭರಿಸತಕ್ಕದ್ದು.

6) ಅಭಿವೃದ್ಧಿದಾರರು ಕಟ್ಟಡದ ಪ್ರವೇಶ ದ್ವಾರದಲ್ಲಿ ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು.

7) ಕಟ್ಟಡದ ನಿರ್ಮಾಣ ವೆಚ್ಚವು ಪ್ರತೀ ಚದರ ಅಡಿಗೆ 650/- ಕ್ಕಿಂತ ಹೆಚ್ಚಾದಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಅಂದಾಜು ಮೊತ್ತದ ಶೇ 1% ರಷ್ಟು ಮೊತ್ತವನ್ನು ಪ್ರಾಧಿಕಾರಕ್ಕೆ ಭರಿಸತಕ್ಕದ್ದು.

8) ಅರ್ಜಿದಾರರು ಕಟ್ಟಡ ನಕ್ಷೆ ಮಂಜೂರಾತಿ ಸಮಯದಲ್ಲಿ ಬಾಕಿ ಇರುವ ಯಾವುದೇ ಅಭಿವೃದ್ಧಿ ಶುಲ್ಕ ಅಥವಾ ಇನ್ನಾವುದೇ ಶುಲ್ಕಗಳನ್ನು ಬಿಬಿಎಂಪಿ / ಬಿಡಿಎ ಸಂಸ್ಥೆಗಳಿಗೆ ಕಟ್ಟಡ ಪ್ರಾರಂಭಿಸುವ ಮೊದಲು ಸಂದಾಯ ಮಾಡತಕ್ಕದ್ದು.

9) ಅರ್ಜಿದಾರರು ಅಗತ್ಯವಿದ್ದಲ್ಲಿ State Level Environment Impact Assessment Authority, Karnataka (Constituted by Ministry of Environment and Forest, Government of India) ರವರಿಂದ ಯೋಜನೆಯ ಬಗ್ಗೆ ಕ್ಲಿಯರೆನ್ಸ್ ಪತ್ರವನ್ನು ಪಡೆಯತಕ್ಕದ್ದು.

10) ಅರ್ಜಿದಾರರು ಕಾಮಗಾರಿ ಪ್ರಾರಂಭಿಸುವ ಮೊದಲು ಕಾಮಗಾರಿ ಪ್ರಾರಂಭಿಕ ಪ್ರಮಾಣ ಪತ್ರ ಹಾಗೂ ಕಾಮಗಾರಿ ಮುಕ್ತಾಯದ ನಂತರ ಸ್ವಾಧೀನಾನುಭವ ಪತ್ರವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪಡೆಯುವುದು ಕಡ್ಡಾಯವಿರುತ್ತದೆ.

11) ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

12) ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.

13) ಯೋಜನೆಯಲ್ಲಿ ಮಳೆ ನೀರು ಕೊಯ್ಲುಗಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಿಕೊಂಡು ಗೃಹ ಹಾಗೂ ಇನ್ನಿತರೆ ಉಪಯೋಗಗಳಿಗಾಗಿ ಬಳಸಲು ಅವಕಾಶ ಕಲ್ಪಿಸಿಕೊಳ್ಳತಕ್ಕದ್ದು.

14) ಕುಡಿಯುವ ನೀರು ಹಾಗೂ ಬಳಸುವ ನೀರಿಗಾಗಿ ಪ್ರತ್ಯೇಕ ಪೈಪ್ ಲೈನುಗಳನ್ನು (Dual Piping System) ಅಳವಡಿಸುವುದು.

15) ಅಭಿವೃದ್ಧಿದಾರರು ಒಳಚರಂಡಿ ವ್ಯವಸ್ಥೆ ಕಾಮಗಾರಿಯನ್ನು ಸಂಬಂಧಪಟ್ಟ ಇಲಾಖೆಗೆ (BWSSB & DB) ನಿಗದಿಪಡಿಸಿದ ಹಣವನ್ನು ಸಂಧಾಯ ಮಾಡಿ ಇಲಾಖೆಯವರ ಮಾರ್ಗದರ್ಶನದಲ್ಲಿ ನಿರ್ವಹಿಸುವುದು.

16) ಅರ್ಜಿದಾರರು Occupancy Certificate ಅನ್ನು ಪಡೆಯಲು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸುವ ಸಮಯದಲ್ಲಿ ನೀರುಸರಬರಾಜು ಕಾಮಗಾರಿಗಳು, Sewage Treatment Plant ಹಾಗೂ Rain Water Harvesting ಅನ್ನು ವಿನ್ಯಾಸಕ್ಕನುಗುಣವಾಗಿ ನಿರ್ವಹಿಸಿರುವ ಬಗ್ಗೆ BWSSB ಯಿಂದ ದೃಢೀಕರಣ ಪತ್ರವನ್ನು ಸಲ್ಲಿಸುವುದು. ಹಾಗೆಯೇ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದಲೂ ಸಹ ಯೋಜನೆಯ ಸಮರ್ಪಕ ಅನುಷ್ಠಾನದ ಬಗ್ಗೆ ದೃಢೀಕರಣ ಪತ್ರವನ್ನು ಸಲ್ಲಿಸುವುದು.

17) ಅರ್ಜಿದಾರರು ನಿವೇಶನದ ಪ್ರದೇಶದಲ್ಲಿ ಗಿಡಗಳನ್ನು ನೆಡುವುದು ಕಡ್ಡಾಯವಿರುತ್ತದೆ.

18) ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿ ತ್ಯಾಜ್ಯಗಳನ್ನು ಸಂಗ್ರಹಿಸಿ Drywaste ಮತ್ತು Wetwaste ಅನ್ನು ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

19) ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಬೆಂಗಳೂರು ರವರ ದಿನಾಂಕ: 04-03-2006 ರಂದು ವಿಧಿಸಿದ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.

20) ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೆ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.

21) ಅಭಿವೃದ್ಧಿದಾರರು ವಿದ್ಯುತ್‌ಶಕ್ತಿ ಟ್ರಾನ್ಸ್‌ಫಾರ್ಮರ್ ಹಾಗೂ S.T.P. ಗಾಗಿ (ಮಂಜೂರಾದ ನಕ್ಷೆಯಲ್ಲಿ ತೋರಿಸಿದಂತೆ) ಮೀಸಲಿರಿಸಿದ ಜಾಗದಲ್ಲಿಯೇ ಅದನ್ನು ಸ್ಥಾಪಿಸುವುದು.

22) W.P. No. 31562/1997 & W.P. 45727-45730/2011ರಲ್ಲಿ ನ್ಯಾಯಾಲಯವು ನೀಡುವ ಅಂತಿಮ ತೀರ್ಮಾನಕ್ಕೆ ಅರ್ಜಿದಾರರು ಬದ್ಧರಾಗಿರತಕ್ಕದ್ದು. ಹಾಗೂ ಕಾಮಗಾರಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯುವ ಮೊದಲು ಬಾಕಿ ಇರುವ Betterment Tax ಭರಿಸುವ ಕುರಿತು ಪ್ರಮಾಣ ಪತ್ರ ಸಲ್ಲಿಸುವುದು.

23) ಅಭಿವೃದ್ಧಿದಾರರು ಯೋಜನೆ/ಕಟ್ಟಡ ನಿರ್ಮಾಣಕ್ಕಾಗಿ ಅಗತ್ಯ ವಿನ್ಯಾಸಗಳನ್ನು ತಯಾರಿಸಿಕೊಳ್ಳಲು ಕರ್ನಾಟಕ ರಾಜ್ಯ ಸರ್ಕಾರದಿಂದ ನೊಂದಾಯಿತ Structural Engineer ರವರನ್ನು ನೇಮಿಸಿಕೊಂಡು ಅಗತ್ಯ ತಾಂತ್ರಿಕ ವಿನ್ಯಾಸಗಳನ್ನು ತಯಾರಿಸಿಕೊಂಡು ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಳ್ಳತಕ್ಕದ್ದು, ಕಟ್ಟಡವನ್ನು ನಿರ್ಮಿಸಿರುವ ಬಗ್ಗೆ Structural Engineer ರವರಿಂದ ನಮೂನೆ-2 ರಲ್ಲಿ ಪ್ರಮಾಣ ಪತ್ರವನ್ನು (Affidavit) ಸ್ವಾಧೀನಾನುಭವ ಪತ್ರ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

24) ಅಭಿವೃದ್ಧಿದಾರರು ಯೋಜನೆ/ಕಟ್ಟಡ ನಿರ್ಮಾಣ ಕಾರ್ಯವನ್ನು ಸರ್ಕಾರಿಂದ ನೊಂದಾಯಿತ ವಿನ್ಯಾಸಕಾರರಿಂದ (Architect) ನಿರ್ವಹಿಸುವುದು ಹಾಗೂ ಕಟ್ಟಡ ಕಾಮಗಾರಿ ಪೂರ್ಣಗೊಂಡ ನಂತರ ವಿನ್ಯಾಸಕಾರರಿಂದ Completion Certificate ಪಡೆದು ಸಲ್ಲಿಸುವುದು.

25) ಅರ್ಜಿದಾರರು ಕಟ್ಟಡದಲ್ಲಿನ ವಿದ್ಯುದ್ದೀಕರಣ ಕಾಮಗಾರಿಗಳನ್ನು ಸರ್ಕಾರದಿಂದ ನೊಂದಾಯಿತ Electrical Contractor ರವರಿಂದ ನಿರ್ವಹಿಸುವುದು.

26) ಅರ್ಜಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ Released Materials ಗಳಿಂದಾಗಲೀ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ಬ್ಯಾರಿಕೇಡಿಂಗ್ ವ್ಯವಸ್ಥೆ ಮಾಡಿಕೊಂಡು ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು. ತಪ್ಪಿದಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

27) ಅರ್ಜಿದಾರರು ನಕ್ಷೆ ಮಂಜೂರಾತಿಗಾಗಿ ಯಾವುದೇ ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಮಂಜೂರಾದ ನಕ್ಷೆಯನ್ನು ರದ್ದುಪಡಿಸಲಾಗುವುದು ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮ ಜರುಗಿಸಲಾಗುವುದು.

28) ಕಟ್ಟಡ ನಿರ್ಮಾಣದ ಸಮಯದಲ್ಲಿ ಸೆಂಟ್ರಿಂಗ್ ಅಥವಾ ಇನ್ನಿತರೆ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಅರ್ಜಿದಾರರು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರಾತಿ ನೀಡಿದ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ.

29) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ/ಹೊರಡಿಸುವ ಯಾವುದೇ ಷರತ್ತುಗಳಿಗೆ/ ಆದೇಶಗಳಿಗೆ ಅರ್ಜಿದಾರರು ಭದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಮಂಜೂರಾತಿ ನೀಡುವವರ ಸಹಿ ಮತ್ತು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಹುದ್ದೆಯ ಹೆಸರು
ಬೆಂಗಳೂರು

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು (ದಕ್ಷಿಣ) ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.

29/3/14